ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ-183 ಚಿಕ್ಕಲ್ಲಸಂದ್ರ, ಬೆಂಗಳೂರು

ಸಂ: ಸ.ಅ/ವಾ-183/ಪಿ.ಆರ್/07/2021-22 ದಿನಾಂಕ : 23-09-2021

## ವಾರ್ಡ್ ಸಮಿತಿಯ ಸಭೆಯ ನಡವಳಿಗಳು

ವಿಷಯ:- ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ :ಬಿ12(58)ಪಿಆರ್/35/2020-21 ದಿನಾಕ :21-09-2020 ರವರ ಆದೇಶದಂತೆ ದಿನಾಂಕ :23-09-2021 ರಂದು ವಾರ್ಡ್ ಸಂಖ್ಯೆ-183 ಕೆ.ಇ.ಬಿ ಮುಖ್ಯರಸ್ತೆಯಲ್ಲಿರುವ ಯೋಗ ಕೇಂದ್ರದಲ್ಲಿ ನಡೆದ ವಾರ್ಡ್ ಸಮತಿ ಸಭೆಯ ನಡವಳಿಗಳು.

******

ಉಲ್ಲೇಖ (1) ರ ಸಭಾ ಸೂಚನಾ ಪತ್ರದ ಅನುಸಾರ ಆದೇಶದ ಅಂಶಗಳನ್ನು ಪಾಲಿಸಲು ವಾರ್ಡ್ ಕಮಿಟಿ ಸಭೆ ನಿಗಧಿಪಡಿಸಿ ದಿನಾಂಕ :23-09-2021 ರಂದು ವಾರ್ಡ್ ಸಮಿತಿ ಸಂಚಾಲಕರು ಮತ್ತು ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ-183 ರವರಾದ ಶ್ರೀ ರಾಘವೇಂದ್ರ.ಟಿ ರವರು ಪ್ರಾರಂಭದಲ್ಲಿ ಉಪಸ್ಥಿತರಿದ್ದ ನೋಡೆಲ್ ಅಧಿಕಾರಿ ಮತ್ತು ವಾರ್ಡ್ ಸಮಿತಿಯ ಅಧ್ಯಕ್ಷರು ಮತ್ತು ಉಪಸ್ಥಿತರಿದ್ದ ಎಲ್ಲಾ ಅಧಿಕಾರಿಗಳು, ರೆಸಿಡೆನ್ಸ್ ವೆಲ್‌ಫೇರ್ ಆಸೋಸಿಯೇಶನ್ ಹಾಗೂ ಸಾರ್ವಜನಿಕರನ್ನು ಸ್ವಾಗತ ಕೋರಿದರು.

ಅಧ್ಯಕ್ಷರ ಅಪ್ಪಣೆ ಮೇರೆಗೆ ವಾರ್ಡ್ ಸಮಿತಿ ಸಭೆಯನ್ನು ಪ್ರಾರಂಭಿಸಲಾಯಿತು.

ಸಭೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರು ಹಾಜರಿರುತ್ತಾರೆ.

ಇಂದಿನ ಸಭೆಯಲ್ಲಿ ಚರ್ಚಿಸಲಾದ ವಿಷಯಗಳು :-

1. ಭುವನೇಶ್ವರಿನಗರ ಉಧ್ಯಾನವನದ ಎದುರು ಇರುವ ಟ್ರಾನ್ಸ್‌ಫಾರ್ಮರ್‌ನ ಮೇಲೆ ಇರುವ ಮರದ ಕೊಂಬೆಗಳನ್ನು ಕತ್ತರಿಸುವಂತೆ ಹಾಗೂ ಭುವನೇಶ್ವರಿನಗರದ ಉಧ್ಯಾನವನದ ಒಳಗೆ ಇರುವ ಮರಗಳಲ್ಲಿ ಒಣಗಿದ ಕೊಂಬೆಗಳು ಇರುವುದಾಗಿ ಸಾರ್ವಜನಿಕರು ದೂರು ನೀಡಿದ್ದರೂ ಸಹ ತಾವು ಇದುವರೆಗೆ ಯಾವುದೇ ಕ್ರಮ ವಹಿಸಿರುವುದಿಲ್ಲವೆಂದು ನೋಡೆಲ್ ಅಧಿಕಾರಿಯವರು ಸಭೆಗೆ ತಿಳಿಸಿದಾಗ ಸಭೆಯಲ್ಲಿ ಅರಣ್ಯ ಇಲಾಖೆ ಅಧಿಕಾರಿಗಳು ಕೂಡಲೇ ತೆರವುಗೊಳಿಸುವುದಾಗಿ ಮಾನ್ಯ ಅಧ್ಯಕ್ಷರ ಗಮನಕ್ಕೆ ತಂದರು.

2) ಭುವನೇಶ್ವರಿನಗರ ಉಧ್ಯಾನವನದ ಉಸ್ತುವಾರಿಯನ್ನು ನೋಡಿಕೊಳ್ಳಲು ಒಬ್ಬರು ಕಾರ್ಮಿಕರನ್ನು ನಿಯೋಜಿಸುವಂತೆ ವಾಡ್ ಸಮಿತಿ ಸಭೆಯಲ್ಲಿ ಸಾರ್ವಜನಿಕರು ಕೋರಿದಾಗ ತೋಟಗಾರಿಕೆ ಇಲಾಖೆಯ ಅಧಿಕಾರಿಗಳಿಗೆ ದೂರವಾಣಿ ಮುಖಾಂತರ ತಿಳಿಸಿ, ಮುಂದಿನ ಸಭೆಗೆ ಹಾಜರಾಗುವಂತೆ ವಾಡ್ ಅಧ್ಯಕ್ಷರು ಸೂಚಿಸಿರುತ್ತಾರೆ,

3) ವಾರ್ಡ್ ಸಂಖ್ಯೆ-183 ರ ಪ್ರದೇಶದಲ್ಲಿ ಬೆಸ್ಕಾಂ ಇಲಾಖೆ ಹಾಗೂ ಓ.ಎಫ್.ಸಿ ಕೇಬಲ್‌ಗಳನ್ನು ಅಳವಡಿಸಲು ಪಿಟ್‌ಗಳನ್ನು ಅಗೆಯಲಾಗಿದ್ದು, ಅವುಗಳನ್ನು ಕೂಡಲೇ ದುರಸ್ಥಿ ಪಡಿಸುವಂತೆ ಬೆಸ್ಕಾಂ ಇಲಾಖೆಯ

Scanned with CamScanner

Scanned by CamScanner

ಅಧಿಕಾರಿಗಳಿಗೆ ತಿಳಿಸಲಾಯಿತು ಹಾಗೂ ಖಾಸಗಿ ಕಂಪನಿಯವರು ಓ.ಎಫ್.ಸಿ ಕೇಬಲ್‌ಗಳನ್ನು ಅಳವಡಿಸಲು ಅಗೆದಿರುವ ಪಿಟ್‌ಗಳನ್ನು ಕೂಡಲೇ ಮುಚ್ಚಲು ಸಂಬಂಧಪಟ್ಟ ಕಂಪನಿಯವರಿಗೆ ಸೂಚಿಸಲು ಸಭೆಯಲ್ಲಿದ್ದ ವಾರ್ಡ್ ಅಭಿಯಂತರರಿಗೆ ನೋಡಲ್ ಅಧಿಕಾರಿಯವರು ತಿಳಿಸಿರುತ್ತಾರೆ.

4) ವಾರ್ಡ್ ಪ್ರದೇಶದಲ್ಲಿ ಬ್ಲಾಕ್ ಸ್ಪಾಟ್ ಹೆಚ್ಚು ಹೆಚ್ಚು ಕಸ ಸಂಗ್ರಹವಾಗುತ್ತಿದ್ದು, ಕೂಡಲೇ ಕಸವನ್ನು ತೆರವುಗೊಳಿಸುವಂತೆ ಸಭೆಯಲ್ಲಿದ್ದ ಸಂಬಂಧಪಟ್ಟ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಮಾನ್ಯ ವಾರ್ಡ್ ಅಧ್ಯಕ್ಷರು ಸೂಚಿಸಿದರು.

ಮಾನ್ಯ ಆಯುಕ್ತರವರ ಸೂಚನೆಯಂತೆ ಪ್ರತಿ ಒಂದನೇ ಹಾಗೂ ಮೂರನೇ ಶನಿವಾರದಂದು ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲು ಹಾಗೂ ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ವಿಭಾಗದ ಅಧಿಕಾರಿಗಳು ಸಭೆಯಲ್ಲಿ ಹಾಜರಿರಲು ಕೋರುತ್ತಾ ಮತ್ತು ಮುಂದಿನ ಸಭೆಯಲ್ಲಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ ರವರನ್ನು ಹೆಚ್ಚಿನ ಸಂಖ್ಯೆಯಲ್ಲಿ ಆಹ್ವಾನಿಸಲು ಸಂಚಾಲಕರಿಗೆ ಸೂಚಿಸಿ ಸಭೆಯಲ್ಲಿ ಯಾವುದೇ ಪ್ರಸ್ತಾವನೆ ಮಾಡದಿದ್ದ ಕಾರಣ ನೋಡಲ್ ಅಧಿಕಾರಿ/ಅಧ್ಯಕ್ಷರ ಅಪ್ಪಣೆ ಮೇರೆಗೆ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

Raghavendra.T

ವಾರ್ಡ್ ಸಮಿತಿ ಸಂಚಾಲಕರು

ವಾರ್ಡ್ ಸಮಿತಿ ನೋಡಲ್ ಅಧಿಕಾರಿ.

Scanned by CamScanner

## ವಾರ್ಡ್ ಸಮಿತಿ ಸಭೆಗೆ ಹಾಜರಾಗಿದ್ದ ಅಧಿಕಾರಿಗಳು :-

| ಕ್ರಮ ಸಂಖ್ಯೆ | ಅಧಿಕಾರಿ ಹೆಸರು | ಹುದ್ದೆ | ಸಹಿ |
|---|---|---|---|
| 1. | K. Venkatesh | T.I. ARO | [signature] |
| 2. | Rajashekara. G.R. | AG (E). BESCOM | [signature] |
| 3. | B. MURTHY | W.I - BWSSB | [signature] |
| 4. | ಗಂಗಾಧರಸ್ವಾಮಿ | SrHI.183 | [signature] SrHI.183 23/09/21 |
| 5. | ಅನಿತಾ. ಆರ್. | ನ್.ಆ.H.I 183 | [signature] 23/09/21 |
| 6. | | | |
| 7. | | | |
| 8. | | | |
| 9. | | | |
| 10. | | | |
| 11. | | | |
| 12. | | | |
| 13. | | | |
| 14. | | | |
| 15. | | | |
| 16. | | | |

Scanned by CamScanner

# ವಾರ್ಡ್ ಸಮಿತಿ ಸಭೆಗೆ ಹಾಜರಾಗಿದ್ದ ಸಾರ್ವಜನಿಕರು :-

| ಕ್ರಮ ಸಂಖ್ಯೆ | ಹೆಸರು | ಸಹಿ |
|---|---|---|
| 1. | P. HARi | P. Hari 23/9/21 |
| 2. | Manini S | [signature] 23/9/21 |
| 3. | ಎ. ಶಂಕರಪ್ಪ | [signature] 23/9/21 |
| 4. | | |
| 5. | | |
| 6. | | |
| 7. | | |
| 8. | | |
| 9. | | |
| 10. | | |
| 11. | | |
| 12. | | |
| 13. | | |
| 14. | | |
| 15. | | |
| 16. | | |
| 17. | | |
| 18. | | |
| 19. | | |

Scanned by CamScanner